ಪ್ರಜಾವಾಣಿ

**Saturday, October 22nd, 2011**

# ಅಂತರ ವಿವಿ ಈಜು: ಜೈನ್ ತಂಡಕ್ಕೆ ಸಮಗ್ರ ಪ್ರಶಸ್ತಿ

ಕೋಲ್ಕತ್ತ: ಉದ್ಯಾನನಗರಿಯ ಜೈನ್ ವಿಶ್ವವಿದ್ಯಾಲಯ ತಂಡ ಶುಕ್ರವಾರ ಇಲ್ಲಿ ಕೊನೆಗೊಂಡ ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಈಜು ಚಾಂಪಿಯನ್‌ಷಿಪ್‌ನಲ್ಲಿ ಸಮಗ್ರ ಪ್ರಶಸ್ತಿ ಗೆದ್ದುಕೊಂಡಿತು.

ಜೈನ್ ವಿವಿ ತಂಡ ಒಟ್ಟು 143 ಪಾಯಿಂಟ್ ಕಲೆಹಾಕಿ ಅಗ್ರಸ್ಥಾನ ಪಡೆಯಿತು. ಮಹಿಳೆಯರ ವಿಭಾಗದಲ್ಲಿ ಈ ತಂಡ 101 ಪಾಯಿಂಟ್‌ಗಳನ್ನು ಸಂಗ್ರಹಿಸಿ ಪ್ರಭುತ್ವ ಸಾಧಿಸಿತು. ಮಾತ್ರವಲ್ಲ ಕೂಟದಲ್ಲಿ ಒಟ್ಟು 17 ಚಿನ್ನದ ಪದಕಗಳನ್ನು ಗೆದ್ದುಕೊಂಡಿತು.

ಬೆಂಗಳೂರು ವಿಶ್ವವಿದ್ಯಾಲಯ ಒಟ್ಟು 74 ಪಾಯಿಂಟ್‌ಗಳೊಂದಿಗೆ ಪುರುಷರ ವಿಭಾಗದಲ್ಲಿ ಪಾರಮ್ಯ ಮೆರೆಯಿತು. ಈ ತಂಡದ ಆ್ಯರನ್ ಡಿ ಸೋಜಾ 'ಶ್ರೇಷ್ಠ ಈಜು ಸ್ಪರ್ಧಿ' ಗೌರವ ಪಡೆದರು. ಅವರು ಒಟ್ಟು 10 ಚಿನ್ನ, ಒಂದು ಬೆಳ್ಳಿ ಹಾಗೂ ಎರಡು ಕಂಚು ಗೆದ್ದುಕೊಂಡರು.

ಕೊನೆಯ ದಿನವಾದ ಶುಕ್ರವಾರ ಆ್ಯರನ್ ಎರಡು ನೂತನ ಕೂಟ ದಾಖಲೆಗಳನ್ನು ನಿರ್ಮಿಸಿದರು. ಪುರುಷರ 100 ಮೀ. ಫ್ರೀಸ್ಟೈಲ್ ಸ್ಪರ್ಧೆಯಲ್ಲಿ ಅವರು 51.80 ಸೆಕೆಂಡ್‌ಗಳಲ್ಲಿ ಗುರಿ ತಲುಪಿದರು. ರೋಹಿತ್ ಹವಾಲ್ದಾರ್ (53.32 ಸೆ.) ಮೂರು ವರ್ಷಗಳ ಹಿಂದೆ ಸ್ಥಾಪಿಸಿದ್ದ ದಾಖಲೆಯನ್ನು ಮುರಿದರು.

200 ಮೀ. ಬಟರ್‌ಫ್ಲೈ ಸ್ಪರ್ಧೆಯಲ್ಲಿ ಆ್ಯರನ್ 2:02.75 ಸೆ.ಗಳಲ್ಲಿ ಗುರಿ ತಲುಪಿ ಚಿನ್ನ ಗೆದ್ದರು. ತಮ್ಮದೇ ಹೆಸರಿನಲ್ಲಿದ್ದ (2:09.20) ದಾಖಲೆಯನ್ನು ಉತ್ತಮಪಡಿಸಿಕೊಂಡರು.

ಪುರುಷರ 1500 ಮೀ. ಫ್ರೀಸ್ಟೈಲ್ ವಿಭಾಗದ ಸ್ಪರ್ಧೆಯಲ್ಲಿ ಜೈನ್ ವಿವಿಯ ಎ.ಪಿ. ಗಗನ್ 16:26.41 ಸೆಕೆಂಡ್‌ಗಳಲ್ಲಿ ಗುರಿ ತಲುಪಿ ಕೂಟ ದಾಖಲೆ ಸ್ಥಾಪಿಸಿದರು. ಎರಡು ವರ್ಷಗಳ ಹಿಂದೆ ತಾವೇ ಸ್ಥಾಪಿಸಿದ್ದ (17:02.34 ಸೆ.) ದಾಖಲೆ ಉತ್ತಮಪಡಿಸಿಕೊಂಡರು.

ಮಹಿಳೆಯರ 100 ಮೀ. ಬ್ರೆಸ್ಟ್‌ಸ್ಟ್ರೋಕ್ ಸ್ಪರ್ಧೆಯಲ್ಲಿ ಜೈನ್ ವಿವಿಯ ಸುರಭಿ ತಿಪ್ರೆ 1:19.66 ಸೆಕೆಂಡ್‌ಗಳಲ್ಲಿ ಗುರಿ ತಲುಪಿ ಚಿನ್ನ ಗೆದ್ದರು. ಈ ಹಾದಿಯಲ್ಲಿ ಅವರು ಕೂಟ ದಾಖಲೆಯನ್ನೂ ಬರೆದರು. 2008 ರಲ್ಲಿ ತೇಜಸ್ವಿನಿ (1:21.37 ಸೆ.) ಸ್ಥಾಪಿಸಿದ್ದ ದಾಖಲೆ ಮುರಿದರು. ಮಹಿಳೆಯರ 200 ಮೀ. ಬಟರ್‌ಫ್ಲೈ ವಿಭಾಗದ ಸ್ಪರ್ಧೆಯಲ್ಲಿ ವಿಟಿಯು ತಂಡದ ಪೂಜಾ ಆರ್. ಆಳ್ವ ನೂತನ ಕೂಟ ದಾಖಲೆಯೊಂದಿಗೆ ಚಿನ್ನದ ಪದಕ ಗೆದ್ದುಕೊಂಡರು. ಅವರು 2:30.12 ಸೆಕೆಂಡ್‌ಗಳಲ್ಲಿ ಗುರಿ ತಲುಪಿದರು.